**ಕರ್ನಾಟಕ ಸರ್ಕಾರ**

**ಆಯುಷ್ ಇಲಾಖೆ**

**ಧನ್ವಂತರಿ ರಸ್ತೆ, ಆನಂದರಾವ್ ವೃತ್ತದ ಹತ್ತಿರ, ಬೆಂಗಳೂರು-560 009**

**ದೂರವಾಣಿ ಸಂಖ್ಯೆ: 080-22876553 , ಫ್ಯಾಕ್ಸ್ : 080-22340139**

**ಇ-ಮೇಲ್ : directorayush.est@gmail.com**

---

ಸಂಖ್ಯೆ: ಆಯುಷ್/ 7 / ಸಿಬ್ಬಂದಿ(5)/2025/ಇ.ಆ. ದಿನಾಂಕ: 30-05-2025

**ಸುತ್ತೋಲೆ**

ವಿಷಯ : 2025ನೇ ಸಾಲಿನ ವರ್ಗಾವಣೆಗಳ ವೇಳಾಪಟ್ಟಿಯ ಕುರಿತು.

ಉಲ್ಲೇಖ:
1. ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ವೈದ್ಯಾಧಿಕಾರಿಗಳು ಮತ್ತು ಇತರೆ ಸಿಬ್ಬಂದಿಯ ವರ್ಗಾವಣೆ ನಿಯಂತ್ರಣ) ಕಾಯ್ದೆ 2011 ಹಾಗೂ ಕಾಲಕಾಲಕ್ಕೆ ಹೊರಡಿಸಲಾದ ತಿದ್ದುಪಡಿಗಳು.
2. ಸರ್ಕಾರದ ಅಧಿಸೂಚನೆ ಸಂಖ್ಯೆ: ಆಕುಕ 220 ಹೆಚ್‌ಎಸ್‌ಹೆಚ್ 2025, ದಿನಾಂಕ : 27.05.2025.
3. ಸರ್ಕಾರದ ಆದೇಶ ಸಂಖ್ಯೆ: ಆಕುಕ 101 ಪಿಐಎಂ 2025, ದಿನಾಂಕ : 29.05.2025.

*****

2025ನೇ ಸಾಲಿನ ವರ್ಗಾವಣೆಯನ್ನು ಉಲ್ಲೇಖಿತ ಕರ್ನಾಟಕ ರಾಜ್ಯ ಸಿವಿಲ್ ಸೇವೆಗಳ (ವೈದ್ಯಾಧಿಕಾರಿಗಳು ಮತ್ತು ಇತರ ಸಿಬ್ಬಂದಿಯ ವರ್ಗಾವಣೆ ನಿಯಂತ್ರಣ) ಕಾಯ್ದೆ 2011 ಹಾಗೂ ಉಲ್ಲೇಖಿತ(2)ರಲ್ಲಿ ರಚಿಸಲಾಗಿರುವ ನಿಯಮಾವಳಿಗಳನ್ವಯ ಹಾಗೂ ಉಲ್ಲೇಖ(3)ರ ಸರ್ಕಾರದ ಆದೇಶದಂತೆ ವರ್ಗಾವಣೆಯನ್ನು ನಡೆಸಲು ಆದೇಶಿಸಲಾಗಿದೆ.

ಅದರಂತೆ, ಆಯುಷ್ ಇಲಾಖೆಯಲ್ಲಿ 2025ನೇ ಸಾಲಿನಲ್ಲಿ ವರ್ಗಾವಣೆ ಕಾಯ್ದೆ ಮತ್ತು ನಿಯಮ 6(1) ರನ್ವಯ ಸಾರ್ವಜನಿಕ ಹಿತದೃಷ್ಟಿಯಿಂದ ಕನಿಷ್ಠ ಸೇವಾವಧಿ ಪೂರೈಸಿರುವ ಮತ್ತು ನಿಯಮ 6 (3) ರನ್ವಯ ವಿಶೇಷ ವರ್ಗದ ಕೋರಿಕೆ ವರ್ಗಾವಣೆಗೆ ಸಂಬಂಧಿಸಿದಂತೆ ಗ್ರೂಪ್ ಎ, ಬಿ, ಸಿ ಮತ್ತು ಡಿ ವೃಂದದ ಅಧಿಕಾರಿ /ಸಿಬ್ಬಂದಿಗಳ ಮಾಹಿತಿಯನ್ನು ಸಲ್ಲಿಸುವ ವರ್ಗಾವಣೆಯ ವೇಳಾಪಟ್ಟಿಯನ್ನು ಉಲ್ಲೇಖ(3)ರ ಸರ್ಕಾರದ ಆದೇಶದನ್ವಯ ಈ ಕೆಳಕಂಡಂತೆ ನಿಗದಿಪಡಿಸಲಾಗಿದೆ.

| ಕ್ರ.ಸಂ. | ವಿವರಗಳು | ವೇಳಾಪಟ್ಟಿಯ ದಿನಾಂಕ |
|---|---|---|
| 1. | ವರ್ಗಾವಣೆ ಕಾಯ್ದೆ ಮತ್ತು ನಿಯಮ 6ನೇ ನಿಯಮದ (1) ನೇ ಉಪ-ನಿಯಮದಂತೆ ಸಾರ್ವಜನಿಕ ಹಿತದೃಷ್ಟಿಯಿಂದ ವರ್ಗಾವಣೆಗೆ ಮಾಹಿತಿಯನ್ನು ಮತ್ತು ನಿಯಮ 6(3) ರನ್ವಯ ವಿಶೇಷ ವರ್ಗದ ಕೋರಿಕೆ ವರ್ಗಾವಣೆ ಅರ್ಜಿಯನ್ನು ಜಿಲ್ಲಾ ಆಯುಷ್ ಅಧಿಕಾರಿಗಳ ಕಛೇರಿಗೆ ಸಲ್ಲಿಸುವ ದಿನಾಂಕ. | 23-05-2025 ರಿಂದ 31-05-2025 ರವರೆಗೆ |
| 2. | ಜಿಲ್ಲಾ ಆಯುಷ್ ಅಧಿಕಾರಿಗಳ ಕಛೇರಿಯಲ್ಲಿ ಸ್ವೀಕೃತವಾದ ಮಾಹಿತಿಯನ್ನು ಹಾಗೂ ಜಿಲ್ಲೆಯ ಎಲ್ಲಾ ವೃಂದವಾರು ಖಾಲಿ ಹುದ್ದೆಗಳ ಮಾಹಿತಿಯನ್ನು ದೃಢೀಕರಿಸಿ ಆಯುಕ್ತಾಲಯಕ್ಕೆ ಕಳುಹಿಸಲು ನಿಗದಿಪಡಿಸಲಾದ ಕೊನೆಯ ದಿನಾಂಕ | 02-06-2025ರ ಸಂಜೆ 5.30 ಗಂಟೆ ಒಳಗೆ |
| 3. | ಆಯುಕ್ತಾಲಯದಲ್ಲಿ ಸ್ವೀಕೃತಗೊಂಡ ಮಾಹಿತಿಯನ್ನು ಪರಿಶೀಲಿಸಿ ತಾತ್ಕಾಲಿಕ ಪಟ್ಟಿಯನ್ನು ಸಿದ್ಧಪಡಿಸಿ ಪ್ರಕಟಿಸುವ ದಿನಾಂಕ | 06-06-2025 |
| 4 | | |

| | | |
|---|---|---|
| 4. | ತಾತ್ಕಾಲಿಕ ಪಟ್ಟಿಗೆ ಆಕ್ಷೇಪಣೆ ಸಲ್ಲಿಸಲು ಅಧಿಕಾರಿ/ನೌಕರರಿಗೆ 07 ದಿನಗಳ ಅವಕಾಶ | 06-06-2025 ರಿಂದ 12-06-2025 |
| 5. | ಆಯುಕ್ತಾಲಯದಲ್ಲಿ ತಾತ್ಕಾಲಿಕ ಪಟ್ಟಿಗೆ ಬಂದ ಆಕ್ಷೇಪಣೆ ಸರಿಪಡಿಸಿ ಅರ್ಹ ಅಂತಿಮ ಪಟ್ಟಿಯನ್ನು ಪ್ರಕಟಿಸುವ ದಿನಾಂಕ | 14-06-2025 |
| 6. | ಆಯುಕ್ತಾಲಯದಲ್ಲಿ ಅಂತಿಮ ಪಟ್ಟಿಯಂತೆ ವೃಂದವಾರು ಸಮಾಲೋಚನೆಯನ್ನು ಪ್ರಾರಂಭಿಸುವುದು. (ಹುದ್ದೆವಾರು ಸಮಾಲೋಚನಾ ಸಮಯವನ್ನು ಪ್ರತ್ಯೇಕವಾಗಿ ಪ್ರಕಟಿಸಲಾಗುವುದು) | 15-06-2025 |

ಎಲ್ಲಾ ಜಿಲ್ಲಾ ಆಯುಷ್ ಅಧಿಕಾರಿಗಳು ಈ ಬಗ್ಗೆ ತಮ್ಮ ವೈಯಕ್ತಿಕ ಗಮನಹರಿಸಿ ಗ್ರೂಪ್ ಎ, ಬಿ, ಸಿ & ಡಿ ವೃಂದದ ಅಧಿಕಾರಿ/ ಸಿಬ್ಬಂದಿಗಳ **ವಿಶೇಷ ವರ್ಗದ ಕೋರಿಕೆ ವರ್ಗಾವಣೆ ಅರ್ಜಿ, ಸಾರ್ವಜನಿಕ ಹಿತಾಸಕ್ತಿ ಕನಿಷ್ಠ ಸೇವಾವಧಿ ಪೂರೈಸಿರುವ ಪ್ರಸ್ತುತ ಹುದ್ದೆಯಲ್ಲಿ ಹೆಚ್ಚು ಕಾಲಾವಧಿಯಿಂದ ಇರುವ (most long standing) ಅಧಿಕಾರಿ/ಸಿಬ್ಬಂದಿಗಳ ಮಾಹಿತಿಯನ್ನು ನಿಗದಿತ ನಮೂನೆಯಲ್ಲಿ ಭರ್ತಿ ಮಾಡಿದ ಮಾಹಿತಿ ಹಾಗೂ ಖಾಲಿ ಹುದ್ದೆಗಳ ದೃಢೀಕರಿಸಿದ ಮಾಹಿತಿಯನ್ನು** ಸೂಚಿಸಿರುವ ದಿನಾಂಕದೊಳಗಾಗಿ (Hard/Soft copy) ಆಯುಕ್ತಾಲಯದಲ್ಲಿ ವರ್ಗಾವಣೆ ಪ್ರಕ್ರಿಯೆಯನ್ನು ನಿರ್ವಹಿಸುವ ವಿಷಯ ನಿರ್ವಾಹಕರಿಗೆ ಮುದ್ದಾಂ ಸಲ್ಲಿಸತಕ್ಕದ್ದು.

ವರ್ಗಾವಣೆ ಕಾಯ್ದೆ 2011 ಮತ್ತು ಇದರಡಿ ರಚಿತವಾದ ನಿಯಮಗಳನ್ವಯ, ಪರಿಶೀಲಿಸಿ ಅರ್ಜಿಗಳನ್ನು ಸಲ್ಲಿಸುವುದು. ತಪ್ಪಿದಲ್ಲಿ, ಮಾಹಿತಿ ಸಲ್ಲಿಸದಿರುವ ಹಾಗೂ ತಪ್ಪಾದ ಮಾಹಿತಿ ನೀಡಿದ ಜಿಲ್ಲಾ ಆಯುಷ್ ಅಧಿಕಾರಿಗಳು ಹಾಗೂ ನಿಯಂತ್ರಣಾಧಿಕಾರಿಗಳನ್ನೇ ನೇರ ಹೊಣೆಗಾರರನ್ನಾಗಿಸಿ ಸಂಬಂಧಪಟ್ಟವರ ಮೇಲೆ ನಿಯಮಾನುಸಾರ ಶಿಸ್ತು ಕ್ರಮ ತೆಗೆದುಕೊಳ್ಳಲಾಗುವುದು.

Digitally signed by
VIPIN SINGH
Date: 30-05-2025
18:02:02
ಆಯುಕ್ತರು

**ಇವರಿಗೆ:-**

1. ಎಲ್ಲಾ ಪ್ರಾಚಾರ್ಯರುಗಳಿಗೆ.
2. ಎಲ್ಲಾ ಜಿಲ್ಲಾ ಆಯುಷ್ ಅಧಿಕಾರಿಗಳಿಗೆ.
3. ಎಲ್ಲಾ ಅಧೀನ ಸಂಸ್ಥೆ/ಕಛೇರಿಗಳ ಮುಖ್ಯಸ್ಥರಿಗೆ.
4. ಆಡಳಿತಾಧಿಕಾರಿಗಳು, ಆಯುಷ್ ನಿರ್ದೇಶನಾಲಯ, ಬೆಂಗಳೂರು.
5. ಆಯುಕ್ತರು/ ಮುಖ್ಯ ಆಡಳಿತಾಧಿಕಾರಿಗಳ ಆಪ್ತ ವಿಭಾಗ, ಆಯುಷ್ ನಿರ್ದೇಶನಾಲಯ, ಬೆಂಗಳೂರು.
6. ನಿರ್ದೇಶನಾಲಯದಲ್ಲಿ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ಅಧಿಕಾರಿ/ನೌಕರರುಗಳಿಗೆ.
7. ಸಂಬಂಧಿಸಿದ ವಿಷಯ ನಿರ್ವಾಹಕರಿಗೆ ರವಾನಿಸುತ್ತಾ ಇಲಾಖೆಯ ಅಧಿಕೃತ ಅಂತರ್ಜಾಲದಲ್ಲಿ ಪ್ರಕಟಿಸಲು ಸೂಚಿಸಿದೆ.
8. ಕ.ಪ್ರತಿ/ಹೆ.ಪ್ರತಿ.

**ಪ್ರತಿಯನ್ನು ಮಾಹಿತಿಗಾಗಿ ಗೌರವಗಳೊಂದಿಗೆ ಸಲ್ಲಿಸಲಾಗಿದೆ:-**

1. ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಸಚಿವರ ಆಪ್ತ ಕಾರ್ಯದರ್ಶಿಯವರಿಗೆ ಸಲ್ಲಿಸುತ್ತಾ ಮಾನ್ಯ ಸಚಿವರ ಗಮನಕ್ಕೆ ತರಲು ಕೋರಲಾಗಿದೆ.
2. ಮಾನ್ಯ ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು ವಿಕಾಸ ಸೌಧ ಬೆಂಗಳೂರು